ಆ)

| | | | | |
|---|---|---|---|---|
| | 270.94 ಲಕ್ಷ | 451.16 ಲಕ್ಷ | 253.05 ಲಕ್ಷ | 975.15 ಲಕ್ಷ |

ಇ) ಈ ನಿಟ್ಟಿನಲ್ಲಿ ಸರ್ಕಾರದ ಆದೇಶಾನುಸಾರ ಜೂನ್–2013ರ ಮಾಹೆಯಿಂದ ಈವರೆಗೆ ಜಿಲ್ಲೆಯ ಎಲ್ಲಾ ಹೋಬಳಿಗಳಲ್ಲಿ ಎರಡು ಸುತ್ತು ಪಿಂಚಣಿ ಅದಾಲತ್‌ಗಳನ್ನು ನಡೆಸಲಾಗಿದ್ದು, ಗುರುತಿಸಲಾದ 5510 ಅರ್ಹರಿಗೆ ಮಾಸಾಶನ ಮಂಜೂರಾತಿ ನೀಡಲಾಗಿದೆ. ಸರ್ಕಾರದ ಆದೇಶದಂತೆ ಪಿಂಚಣಿ ಅದಾಲತ್‌ಗಳನ್ನು ಮುಂದುವರೆಸಿಕೊಂಡು ಹೋಗುತ್ತಿರುವುದರಿಂದ ಅರ್ಜಿ ಸಲ್ಲಿಸುವ ಅರ್ಹರೆಲ್ಲರಿಗೂ ಮಾಸಾಶನ ಸೌಲಭ್ಯ ಕಲ್ಪಿಸಲಾಗುವುದು.

**ಅಕ್ರಮ–ಸಕ್ರಮ ಯೋಜನೆ**

**2086(2442); ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ)**

ಅ) ಬೆಳಗಾವಿ ಜಿಲ್ಲೆಯಲ್ಲಿ ಅಕ್ರಮ–ಸಕ್ರಮ ಯೋಜನೆಯಲ್ಲಿ ಮಂಜೂರಾದ ಜಾಗಗಳಲ್ಲಿ ನಿವೇಶನಗಳನ್ನು ಕಳೆದ 2 ವರ್ಷಗಳಿಂದ ರಚನೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಜಾಗಗಳಲ್ಲಿ ನಿವೇಶನಗಳನ್ನು ರಚನೆ ಮಾಡದಿರಲು ಕಾರಣಗಳೇನು;

ಇ) ಅಕ್ರಮ–ಸಕ್ರಮ ಯೋಜನೆಯಡಿ ಜಾಗ ಪಡೆದ ಎಷ್ಟು ಮಂದಿಯ ಜಾಗಗಳ ನಿವೇಶನಗಳನ್ನು ಪ್ಲಾತಿಂಗ್‌ಗಳನ್ನು ಮಾಡಬೇಕಾಗಿದೆ; (ತಾಲ್ಲೂಕುವಾರು ವಿವರ ನೀಡುವುದು);

ಈ) ಪ್ಲಾತಿಂಗ್ ಮಾಡಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ; (ಪೂರ್ಣ ವಿವರ ನೀಡುವುದು)?

**ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು)**

ಅ) ಬೆಳಗಾವಿ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಇರುವುದಿಲ್ಲ.

ಆ) ಅನ್ವಯಿಸುವುದಿಲ್ಲ

ಇ) ಅನ್ವಯಿಸುವುದಿಲ್ಲ

ಈ) ಅನ್ವಯಿಸುವುದಿಲ್ಲ

**ಸಾಮಾಜಿಕ ಹಾಗೂ ಪ್ರಾದೇಶಿಕ ಅರಣ್ಯ ಭೂಮಿ**

**2088(2444); ಶ್ರೀ ಲಕ್ಷ್ಮಣಸಂಗಪ್ಪ ಸವದಿ (ಅಥಣಿ)**

ಅ) ಬೆಳಗಾವಿ ಜಿಲ್ಲೆಯ ಸಾಮಾಜಿಕ ಹಾಗೂ ಪ್ರಾದೇಶಿಕ ಅರಣ್ಯ ಭೂಮಿಯ ವಿಸ್ತೀರ್ಣ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು);

ಆ) ಸಾಮಾಜಿಕ ಹಾಗೂ ಪ್ರಾದೇಶಿಕ ಅರಣ್ಯ ಭೂಮಿಯನ್ನು ಒತ್ತುವರಿ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು;

ಇ) ಒತ್ತುವರಿ ಮಾಡಿರುವವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)?

**ಶ್ರೀ ಬಿ. ರಮಾನಾಥ ರೈ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)**

ಅ) ಬೆಳಗಾವಿ ಜಿಲ್ಲೆಯ ವ್ಯಾಪ್ತಿಯಲ್ಲಿನ ಅರಣ್ಯ ಪ್ರದೇಶದ ತಾಲ್ಲೂಕುವಾರು ವಿವರಗಳು ಈ ಕೆಳಗಿನಂತಿದೆ.

| ಕ್ರ ಸಂ. | ತಾಲ್ಲೂಕು | ವಿಸ್ತೀರ್ಣ (ಹೆ.ಗಳಲ್ಲಿ) |
|---|---|---|
| 1 | ಗೋಕಾಕ | 21409.337 |
| 2 | ಅಥಣಿ | 849.280 |
| 3 | ಚಿಕ್ಕೋಡಿ | 673.079 |